ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

6 17

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 3/7/2020

# ಮೀಸಲು ಏರಿಕೆಗೆ ಶಿಫಾರಸು

**ಬೆಂಗಳೂರು:** ಕೋವಿಡ್ ಬಿಕ್ಕಟ್ಟಿನ ನಡುವೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಪರಿಶಿಷ್ಟ ಪಂಗಡದವರಿಗೆ ಹಾಲಿ ನೀಡುತ್ತಿರುವ ಮೀಸಲು ಪ್ರಮಾಣವನ್ನು ಶೇ.3ರಿಂದ ಶೇ.7ಕ್ಕೆ




ಹೆಚ್ಚಿಸುವಂತೆ ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ನಾಗಮೋಹನ್ ದಾಸ್ ನೇತೃತ್ವದ ಆಯೋಗ ಸರಕಾರಕ್ಕೆ ಶಿಫಾರಸು ಮಾಡಿದೆ. ಪರಿಶಿಷ್ಟ ಜಾತಿಗೂ ಶೇ.2ರಷ್ಟು (ಶೇ.15ರಿಂದ 17) ಮೀಸಲು ಹೆಚ್ಚಳಕ್ಕೆ ಶಿಫಾರಸು ಮಾಡಲಾಗಿದೆ ಎನ್ನಲಾಗಿದೆ. ಆದರೆ ವರದಿಯನ್ನು ಬಹಿರಂಗಗೊಳಿಸದಿರಲು ಸರಕಾರ ನಿರ್ಧರಿಸಿದೆ. ಎಸ್‌ಸಿ, ಎಸ್‌ಟಿ ಹಾಗೂ ಒಬಿಸಿ ಮೀಸಲು ಪ್ರಮಾಣ ಶೇ.50ನ್ನು ಮೀರಬಾರದೆಂಬ ಸುಪ್ರೀಂ ಆದೇಶದ ಹಿನ್ನೆಲೆಯಲ್ಲಿ ಇಲ್ಲಿ ಯಾವ ಕ್ರಮ ಅನುಸರಿಸಲಾಗುತ್ತದೆ ಎಂಬುದು ಕುತೂಹಲ ಕೆರಳಿಸಿದೆ.

ವಿವರ»04

## ನ್ಯಾ. ನಾಗಮೋಹನ್ ದಾಸ್ ವರದಿ | ಎಸ್ಸಿಗೆ ಶೇ. 15ರಿಂದ 17ಕ್ಕೆ ಏರಿಕೆ | ಮೀಸಲು ಜಾರಿ ಸರಕಾರಕ್ಕೆ ಸವಾಲು

# ಎಸ್‌ಟಿ ಮೀಸಲು ಶೇ.7ಕ್ಕೆ ಹೆಚ್ಚಳ ಶಿಫಾರಸು

■ **ವಿಕ ಸುದ್ದಿಲೋಕ** ಬೆಂಗಳೂರು

ಶಿಕ್ಷಣ ಮತ್ತು ಉದ್ಯೋಗದಲ್ಲಿ ಪರಿಶಿಷ್ಟ ಪಂಗಡದವರಿಗೆ ಹಾಲಿ ನೀಡುತ್ತಿರುವ ಮೀಸಲು ಪ್ರಮಾಣವನ್ನು ಶೇ.3ರಿಂದ ಶೇ.7ಕ್ಕೆ ಹೆಚ್ಚಿಸುವಂತೆ ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ನಾಗಮೋಹನ್ ದಾಸ್ ನೇತೃತ್ವದ ಆಯೋಗ ಸರಕಾರಕ್ಕೆ ಶಿಫಾರಸು ಮಾಡಿದೆ.

ಆದರೆ ಕೋವಿಡ್ ಸಂದರ್ಭದಲ್ಲಿ ಈ ವರದಿಯನ್ನು ಬಹಿರಂಗಗೊಳಿಸದೇ ಇರಲು ಸರಕಾರ ತೀರ್ಮಾನಿಸಿದೆ. ಈ ಮಧ್ಯೆ ಪರಿಶಿಷ್ಟ ಜಾತಿಗೂ ಶೇ.2ರಷ್ಟು ಮೀಸಲು ಹೆಚ್ಚಿಸಲು(ಶೇ.17) ಶಿಫಾರಸು ಮಾಡಿದ್ದರೆಂದು ತಿಳಿದು ಬಂದಿದೆ. ಈ ಶಿಫಾರಸು ಜಾರಿ ಮಾಡುವುದು ಬಿಜೆಪಿ ಸರಕಾರಕ್ಕೆ ಬಿಸಿ ತುಪ್ಪವಾಗಲಿದೆ ಎಂದು ವ್ಯಾಖ್ಯಾನಿಸಲಾಗುತ್ತಿದೆ. ಮೀಸಲು ಹೆಚ್ಚಳದಿಂದ ಇತರ ಸಮುದಾಯದ ಮೇಲೆ ಏನು ಪರಿಣಾಮ ಬೀರಬಹುದು ಎಂಬ ಬಗ್ಗೆ ಅಧ್ಯಯನ ನಡೆಸಲು ರಾಜ್ಯ ಸರಕಾರ ನಿರ್ಧರಿಸಿದೆ.

ಪರಿಶಿಷ್ಟ ಪಂಗಡಕ್ಕೆ ಉದ್ಯೋಗ ಮತ್ತು ಶಿಕ್ಷಣದಲ್ಲಿ ಈಗ ನೀಡುತ್ತಿರುವ ಮೀಸಲು ಸೌಲಭ್ಯವನ್ನು ಶೇ.7ಕ್ಕೆ ಹೆಚ್ಚಿಸುವ ವಿಚಾರದಲ್ಲಿ ತೀವ್ರ ಹೋರಾಟ ನಡೆದ ಹಿನ್ನೆಲೆಯಲ್ಲಿ ಕಾಂಗ್ರೆಸ್-ಜೆಡಿಎಸ್ ಮೈತ್ರಿ ಸರಕಾರದ ಅವಧಿಯಲ್ಲೇ ನ್ಯಾ. ನಾಗಮೋಹನ್ ದಾಸ್ ನೇತೃತ್ವದಲ್ಲಿ ಆಯೋಗ ರಚನೆ ಮಾಡಲಾಗಿತ್ತು. ಬಿಜೆಪಿ ಅಧಿಕಾರಕ್ಕೆ ಬಂದ ನಂತರ ಅಧಿಕಾರಾವಧಿಯನ್ನು ಮತ್ತೆ ವಿಸ್ತರಣೆ ಮಾಡಲಾಗಿತ್ತು.

850 ಲಿಖಿತ ಅಹವಾಲುಗಳು, 42 ಸಮಾಲೋಚನಾ ಸಭೆಗಳನ್ನು ನಡೆಸಿದ ಆಯೋಗ ವರದಿ ಸಿದ್ಧಗೊಳಿಸಿದೆ. ಗೃಹ ಕಚೇರಿ ಕೃಷ್ಣಾದಲ್ಲಿ ಸಿಎಂ ಯಡಿಯೂರಪ್ಪ ಅವರಿಗೆ ವರದಿಯನ್ನು ಗುರುವಾರ ಹಸ್ತಾಂತರಿಸಲಾಗಿದೆ. ಸಿಎಂ ಯಡಿಯೂರಪ್ಪ ಹಾಗೂ ಆಯೋಗದ ಅಧ್ಯಕ್ಷ ನ್ಯಾ. ನಾಗಮೋಹನ್ ದಾಸ್ ಈ ಬಗ್ಗೆ ಯಾವುದೇ ಪ್ರತಿಕ್ರಿಯೆಯನ್ನು ನೀಡಿಲ್ಲ.

ಜಾರ್ಖಂಡ್ ಮತ್ತು ತಮಿಳುನಾಡು ರಾಜ್ಯಗಳ ಮಾದರಿಯಲ್ಲಿ ಮೀಸಲು ಹೆಚ್ಚಳಕ್ಕೆ ಶಿಫಾರಸು ಮಾಡಲಾಗಿದೆ ಎಂದು ತಿಳಿದು ಬಂದಿದೆ. ಮೀಸಲು ಕುರಿತು ಸುಪ್ರೀಂ ಕೋರ್ಟ್ ನೀಡಿರುವ ಸುಮಾರು 40 ಮಹತ್ವದ ತೀರ್ಪುಗಳನ್ನು ನ್ಯಾ. ನಾಗಮೋಹನ ದಾಸ ಅವರು ಅಧ್ಯಯನ ಮಾಡಿ ಈ ಶಿಫಾರಸು ಮಾಡಿದ್ದಾರೆ ಎನ್ನಲಾಗಿದೆ.

### ಹೆಚ್ಚಳಕ್ಕೆ ಪ್ರಸ್ತಾಪ

'ವಿಜಯ ಕರ್ನಾಟಕ'ಕ್ಕೆ ಉನ್ನತ ಮೂಲಗಳಿಂದ ಲಭ್ಯವಾದ ಮಾಹಿತಿ ಪ್ರಕಾರ, ವರದಿಯಲ್ಲಿ ಮೀಸಲು ಪ್ರಮಾಣ ಹೆಚ್ಚಳ ಮಾಡುವ ಬಗ್ಗೆ ಶಿಫಾರಸು ಮಾಡಲಾಗಿದೆ. ಆದರೆ ಈ ಸಂದರ್ಭದಲ್ಲಿ ಬೇರೆ ಸಮುದಾಯದ ಮೀಸಲು ಬುಟ್ಟಿಗೆ ಕೈ ಹಾಕಲಾಗಿದೆಯೇ ಎಂಬ ಬಗ್ಗೆ ಸ್ಪಷ್ಟತೆ ಇಲ್ಲ. ಪರಿಶಿಷ್ಟ ಜಾತಿ, ಪಂಗಡ ಹಾಗೂ ಹಿಂದುಳಿದ ವರ್ಗಗಳ ಮೀಸಲು ಪ್ರಮಾಣ ಶೇ.50ನ್ನು ಮೀರಬಾರದು ಎಂದು ಸುಪ್ರೀಂ ಕೋರ್ಟ್ ಮಹತ್ವದ ಆದೇಶ ನೀಡಿರುವುದರಿಂದ ಮೀಸಲು ಪ್ರಮಾಣ ಹೆಚ್ಚಳಕ್ಕೆ ಯಾವ ಸೂತ್ರ ಅನುಸರಿಸಲಾಗಿದೆ ಎಂಬ ಬಗ್ಗೆ ಯಾವುದೇ ಮಾಹಿತಿ ಲಭ್ಯವಾಗಿಲ್ಲ.

### ಶ್ರೀರಾಮುಲು ರಾಜೀನಾಮೆ ಬೆದರಿಕೆ



ವಾಲ್ಮೀಕಿ ಸಮುದಾಯದ ಮೀಸಲು ಪ್ರಮಾಣ ಹೆಚ್ಚಿಸದೇ ಇದ್ದರೆ ರಾಜೀನಾಮೆ ನೀಡುವುದಾಗಿ ಸಚಿವ ಬಿ. ಶ್ರೀರಾಮುಲು ಈ ಹಿಂದೆ ಘೋಷಣೆ ಮಾಡಿದ್ದರು. ಕಳೆದ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಬಿಜೆಪಿಯು ವಾಲ್ಮೀಕಿ ಸಮುದಾಯಕ್ಕೆ ಈ ಭರವಸೆ ನೀಡಿತ್ತು. ಹೀಗಾಗಿ ಈ ವರದಿ ರಾಜ್ಯದಲ್ಲಿ ಮಹತ್ವದ ಪರಿಣಾಮ ಬೀರುವ ಸಾಧ್ಯತೆ ಇದೆ. ಕೋವಿಡ್ ಸಂದರ್ಭದಲ್ಲಿ ಸರಕಾರ ವರದಿ ಬಹಿರಂಗಗೊಳಿಸಲು ಸಿದ್ಧವಿಲ್ಲ. ಈ ಹಂತದಲ್ಲಿ ಶ್ರೀ ರಾಮುಲು ನಿಲುವೇನು ಎಂಬುದು ಕುತೂಹಲ ಮೂಡಿಸಿದೆ.

### ಹೋರಾಟದ ಬಿಸಿ

ಮೈತ್ರಿ ಸರಕಾರದ ಅವಧಿಯಲ್ಲೇ ಮೀಸಲು ಪ್ರಮಾಣ ಹೆಚ್ಚಳಕ್ಕಾಗಿ ಭಾರಿ ಹೋರಾಟ ನಡೆದಿತ್ತು. ರಾಜಧಾನಿ ಬೆಂಗಳೂರಿನಲ್ಲಿ ಪ್ರತಿಭಟನೆ ನಡೆಸಿದ ವಾಲ್ಮೀಕಿ ಸಮುದಾಯದ ಮುಖಂಡರು ಶ್ರೀ ಪ್ರಸನ್ನಾನಂದಪುರಿ ಸ್ವಾಮೀಜಿಯವರ ನೇತೃತ್ವದಲ್ಲಿ ವಿಧಾನಸೌಧದ ಎದುರು ಪ್ರತಿಭಟನೆ ನಡೆಸಿದ್ದರು. ಈ ಹೋರಾಟಕ್ಕೆ ಮಣಿದ ಸರಕಾರ ನ್ಯಾ. ನಾಗಮೋಹನ್ ದಾಸ್ ನೇತೃತ್ವದಲ್ಲಿ ಆಯೋಗ ರಚನೆ ಮಾಡಿತ್ತು.

## ಆತ್ಮಸಾಕ್ಷಿಯಂತೆ ವರದಿ ನೀಡಿದ್ದೇವೆ

**ಬೆಂಗಳೂರು:** ಆತ್ಮಸಾಕ್ಷಿ ಹಾಗೂ ಸಂವಿಧಾನದ ಆಶಯಕ್ಕೆ ಧಕ್ಕೆ ಬಾರದ ರೀತಿಯಲ್ಲಿ ವರದಿಯನ್ನು ಸರಕಾರಕ್ಕೆ ಸಲ್ಲಿಸಿದ್ದೇವೆ. ಮೀಸಲು ಮತ್ತು ಅದಕ್ಕೆ ಸಂಬಂಧಪಟ್ಟ ವಿಚಾರಗಳಿಗೆ ಸಂಬಂಧಪಟ್ಟಂತೆ ಅಧ್ಯಯನ ನಡೆಸಿ ವರದಿ ಸಲ್ಲಿಸುವಂತೆ



ಸರಕಾರ ಸೂಚಿಸಿತ್ತು. ಈ ಹಿನ್ನೆಲೆಯಲ್ಲಿ ಒಳ ಮೀಸಲು, ಕೆನೆ ಪದರ, ಬಡ್ತಿ ಹಾಗೂ ಖಾಸಗಿ ಕ್ಷೇತ್ರದ ಮೀಸಲು ವಿಚಾರದ ಬಗ್ಗೆ ವರದಿಯಲ್ಲಿ ಪ್ರಸ್ತಾಪಿಸಲಾಗಿದೆ ಎಂದು ನ್ಯಾ. ನಾಗಮೋಹನ್ ದಾಸ್ ಹೇಳಿದ್ದಾರೆ.

ವರದಿ ಸಲ್ಲಿಸಿದ ಹಿನ್ನೆಲೆಯಲ್ಲಿ 'ವಿಜಯ ಕರ್ನಾಟಕ'ದ ಜತೆಗೆ ಮಾತನಾಡಿದ ಅವರು, ವರದಿಯ ಶಿಫಾರಸುಗಳ ಬಗ್ಗೆ ನಾನು ಈಗ ಏನನ್ನೂ ಹೇಳುವುದಕ್ಕೆ ಇಚ್ಛಿಸುವುದಿಲ್ಲ. ಅದೀಗ ಸರಕಾರದ ಆಸ್ತಿ. ಸರಕಾರ ಈ ಬಗ್ಗೆ ನಿರ್ಧಾರ ತೆಗೆದುಕೊಂಡು ಜನರಿಗೆ ತಿಳಿಸಲಿ ಎಂದು ಹೇಳಿದ್ದಾರೆ.

''ಈ ಬಗ್ಗೆ ಅಧ್ಯಯನ ನಡೆಸಿ ವರದಿ ನೀಡುವಂತೆ ಮೈತ್ರಿ ಸರಕಾರ ಆಯೋಗ ರಚನೆ ಮಾಡಿದ ಕೆಲವೇ ದಿನಗಳಲ್ಲಿ ಹೊಸ ಸರಕಾರ ಅಸ್ತಿತ್ವಕ್ಕೆ ಬಂತು. ಈ ಸರಕಾರವೂ ನಮ್ಮ ಮೇಲೆ ವಿಶ್ವಾಸವಿಟ್ಟು ವರದಿ ನೀಡುವಂತೆ ಸೂಚಿಸಿತ್ತು. ಈ ಹಿನ್ನೆಲೆಯಲ್ಲಿ ಲಭ್ಯ ಸಂಪನ್ಮೂಲವನ್ನು ಬಳಸಿಕೊಂಡು ವರದಿ ನೀಡಿದ್ದೇವೆ,'' ಎಂದು ಹೇಳಿದರು.

**ಯಾರ ಮೀಸಲು ಬುಟ್ಟಿಗೆ ಕಡಿತ?**

ವರದಿಯಲ್ಲಿ ಪರಿಶಿಷ್ಟ ಜಾತಿಗೆ ಶೇ.2 ಹಾಗೂ ಪರಿಶಿಷ್ಟ ವರ್ಗಕ್ಕೆ ಶೇ. 4ರಷ್ಟು ಮೀಸಲು ಪ್ರಮಾಣ ಹೆಚ್ಚಿಸುವಂತೆ ಶಿಫಾರಸು ಮಾಡಲಾಗಿದೆ. ಆದರೆ ಇದರಿಂದ ಸುಪ್ರೀಂ ಕೋರ್ಟ್ ನಿಗದಿ ಮಾಡಿದ ಶೇ.50ರ ಮಿತಿ ದಾಟಿದಂತಾಗುತ್ತದೆ. ಹಾಗಾದರೆ ಉಳಿದ ವರ್ಗಕ್ಕೆ ನೀಡಿದ ಮೀಸಲು ಪ್ರಮಾಣ ಕಡಿತ ಮಾಡಲಾಗಿದೆಯೇ ಎಂಬ ಚರ್ಚೆ ಪ್ರಾರಂಭವಾಗಿದೆ.

ಮೂಲಗಳ ಪ್ರಕಾರ ವರದಿಯಲ್ಲಿ ಉಳಿದ ವರ್ಗಕ್ಕೆ ನಿಗದಿಯಾದ ಮೀಸಲು ಪ್ರಮಾಣ ಕಡಿಮೆ ಮಾಡಿಲ್ಲ. ಒಟ್ಟಾರೆಯಾಗಿ ಶೇ.6ರಷ್ಟು ಮೀಸಲು ಹೆಚ್ಚಳಕ್ಕೆ ಸೂಚಿಸಲಾಗಿದೆ. ತಮಿಳುನಾಡು ಹಾಗೂ ಜಾರ್ಖಂಡ್ ಮಾದರಿಯಲ್ಲಿ ಮೀಸಲು ಹೆಚ್ಚಿಸುವಂತೆ ಸರಕಾರಕ್ಕೆ ಶಿಫಾರಸು ಮಾಡಲಾಗಿದೆ. ಹೀಗಾಗಿ ಸರಕಾರ ಈ ವಿಚಾರದಲ್ಲಿ ಯಾವ ನಿರ್ಣಯ ತೆಗೆದುಕೊಳ್ಳುತ್ತದೆ ಎಂಬ ಕುತೂಹಲ ಸೃಷ್ಟಿಯಾಗಿದೆ.

- ಪರಿಶಿಷ್ಟ ಜಾತಿಗೆ ಶೇ.2, ಪರಿಶಿಷ್ಟ ವರ್ಗಕ್ಕೆ ಶೇ.4ರಷ್ಟು ಮೀಸಲು ಹೆಚ್ಚಳಕ್ಕೆ ಶಿಫಾರಸು
- ಒಳಮೀಸಲು, ಕೆನೆಪದರದ ಬಗ್ಗೆ ಪ್ರಸ್ತಾಪ
- ಬಡ್ತಿ ಹಾಗೂ ಖಾಸಗಿ ಕ್ಷೇತ್ರದಲ್ಲಿನ ಮೀಸಲು ಹೆಚ್ಚಳಕ್ಕೂ ಸಲಹೆ
- ಮೀಸಲು ವಂಚಿತ ವರ್ಗಕ್ಕೆ ಅವಕಾಶ ನೀಡುವುದಕ್ಕೆ ಶಿಫಾರಸು
- ಹಿಂದುಳಿದ ವರ್ಗದ ಮೀಸಲು ಪ್ರಮಾಣಕ್ಕೆ ಕಡಿತವಿಲ್ಲ